# All India Radio: Bangalore
# National Bulletin In Kannada
# 01.010.2026  19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

---

ಮುಖ್ಯಾಂಶಗಳು

- ದೇಶದ ಜವಳಿ ರಫ್ತು ಹೆಚ್ಚಿಸಲು ಸರ್ಕಾರ ಕ್ರಮ - ಕೇಂದ್ರ ಸಚಿವ ಗಿರಿರಾಜ್ ಸಿಂಗ್
- ಗ್ರಾಹಕರಿಗೆ ನಿರಂತರ ಸಕ್ಕರೆ ಪೂರೈಕೆ ಖಚಿತಪಡಿಸಲು ದಾಸ್ತಾನು ನಿಯಮ ಪರಿಷ್ಕರಿಸಿದ ಕೇಂದ್ರ ಸರ್ಕಾರ
- ಗಾಂಧಿ ಜಯಂತಿ ಹಿನ್ನೆಲೆಯಲ್ಲಿ ನಾಳೆ ದೇಶಾದ್ಯಂತ ವಿಶೇಷ ಗ್ರಾಮ ಸಭೆಗಳ ಆಯೋಜನೆ
- ಏಷ್ಯನ್ ಗೇಮ್ಸ್: ಪುರುಷರ ಹಾಕಿ ಸ್ಪರ್ಧೆಯಲ್ಲಿ ಪಾಕಿಸ್ತಾನ ತಂಡವನ್ನು ಮಣಿಸಿ, ಫೈನಲ್ ಪ್ರವೇಶಿದ ಭಾರತ

---

ಎಂಎಸ್ಎಂಇ ಗಳನ್ನು ಬಲಪಡಿಸುವ, ಹಣಕಾಸು ಲಭ್ಯತೆಯನ್ನು ಸುಧಾರಿಸುವ ಮತ್ತು ಸಾಗರೋತ್ತರ ಮಾರುಕಟ್ಟೆಗಳಲ್ಲಿ ರಫ್ತು ಸೌಲಭ್ಯ ಕೇಂದ್ರಗಳನ್ನು ವಿಸ್ತರಿಸುವ ಮೂಲಕ ದೇಶದ ಜವಳಿ ರಫ್ತನ್ನು ಹೆಚ್ಚಿಸಲು ಕೇಂದ್ರ ಸರ್ಕಾರ ಗಮನಹರಿಸುತ್ತಿದೆ ಎಂದು ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು 'ಜವಳಿ ಸಮಾವೇಶ ೨೦೨೪' ಉದ್ಘಾಟಿಸಿ ಮಾತನಾಡಿದ ಸಚಿವರು, ಭಾರತೀಯ ಜವಳಿ ಉತ್ಪನ್ನಗಳನ್ನು ಹೆಚ್ಚಿನ ಅಂತಾರಾಷ್ಟ್ರೀಯ ಮಾರುಕಟ್ಟೆಗಳಿಗೆ ತಲುಪಿಸಲು ಸರ್ಕಾರ ಶ್ರಮಿಸುತ್ತಿದೆ. ಹೊಸ ರಫ್ತುದಾರರಿಗೆ ಮಾಹಿತಿ ನೀಡಲು ಮತ್ತು ಅವರನ್ನು ಪ್ರೋತ್ಸಾಹಿಸಲು ವಿವಿಧ ದೇಶಗಳಲ್ಲಿ ರಫ್ತು ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಜವಳಿ ಉದ್ಯಮಗಳು ಎದುರಿಸುತ್ತಿರುವ ಆರ್ಥಿಕ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಈ ವಲಯಕ್ಕೆ ಹೆಚ್ಚಿನ ಸಾಲದ ಹರಿವನ್ನು ಸುಗಮಗೊಳಿಸಲು ಜವಳಿ ಸಚಿವಾಲಯ, ಹಣಕಾಸು ಸೇವೆಗಳ ಇಲಾಖೆ ಮತ್ತು ಬ್ಯಾಂಕರ್‌ಗಳೊಂದಿಗೆ ಚರ್ಚೆ ನಡೆಸಿದೆ ಎಂದು ಅವರು ತಿಳಿಸಿದರು.

ದೇಶದಲ್ಲಿ ಅತಿ ಹೆಚ್ಚು ಉದ್ಯೋಗ ಸೃಷ್ಟಿಸುವ ಪ್ರಮುಖ ವಲಯಗಳಲ್ಲಿ ಜವಳಿ ವಲಯವೂ ಒಂದಾಗಿದೆ. ಪ್ರಸ್ತುತ ಸರ್ಕಾರದ ಅವಧಿಯಲ್ಲಿ ಈ ವಲಯದಲ್ಲಿ ಸುಮಾರು ಐದು ಕೋಟಿ ಜನರು ಉದ್ಯೋಗ ಪಡೆದಿದ್ದಾರೆ ಎಂದು ಸಚಿವ ಗಿರಿರಾಜ್ ಸಿಂಗ್ ಹೇಳಿದರು.

---

ಪ್ರಕೃತಿಯ ಸಮತೋಲನ ಕಾಪಾಡಲು ಹಾಗೂ ಭವಿಷ್ಯದ ಪೀಳಿಗೆಗೆ ಅಮೂಲ್ಯ ಪರಂಪರೆಯನ್ನು ಉಳಿಸಲು, ಅರಣ್ಯ ಮತ್ತು ವನ್ಯಜೀವಿಗಳನ್ನು ಸಂರಕ್ಷಿಸುವುದು ಅಗತ್ಯವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ವನ್ಯಜೀವಿ ಸಪ್ತಾಹ-೨೦೨೫ರ ಸಂದರ್ಭದಲ್ಲಿ ನೀಡಿದ ಸಂದೇಶದಲ್ಲಿ, ವನ್ಯಜೀವಿಗಳು ಮತ್ತು ಅವುಗಳ ಆವಾಸ ಸ್ಥಳಗಳ ಸಂರಕ್ಷಣೆಗೆ ಪ್ರತಿಯೊಬ್ಬ ನಾಗರಿಕರೂ ಕೊಡುಗೆ ನೀಡುವಂತೆ ಅವರು ಕರೆ ನೀಡಿದ್ದಾರೆ.

ಕಳೆದ ಒಂದು ದಶಕದಲ್ಲಿ ವನ್ಯಜೀವಿ ಸಂರಕ್ಷಣೆಯಲ್ಲಿ ಭಾರತ ಸಾಧಿಸಿರುವ ಪ್ರಗತಿಯನ್ನು ಅವರು ಉಲ್ಲೇಖಿಸಿದೆ. ಚೀತಾ ಯೋಜನೆಯ ಯಶಸ್ಸು, ಗ್ರೇಟ್ ಇಂಡಿಯನ್ ಬಸ್ಟರ್ಡ್, ಘೇಂಡಾಮೃಗ, ನದಿ ಡಾಲ್ಫಿನ್ ಹಾಗೂ ಹಿಮಚಿರತೆಯಂತಹ ಪ್ರಭೇದಗಳ ಸಂರಕ್ಷಣಾ ಪ್ರಯತ್ನಗಳನ್ನೂ ಅವರು ಪ್ರಸ್ತಾಪಿಸಿದರು.

ಅಂತಾರಾಷ್ಟ್ರೀಯ ದೊಡ್ಡ ಬೆಕ್ಕುಗಳ ಒಕ್ಕೂಟದ ಮೂಲಕ ದೊಡ್ಡ ಬೆಕ್ಕುಗಳ ಸಂರಕ್ಷಣೆಗೆ ಜಾಗತಿಕ ಸಹಕಾರ ಉತ್ತೇಜಿಸುವಲ್ಲಿ ಭಾರತ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

---

ಹಬ್ಬದ ಋತುವಿನಲ್ಲಿ ಹೆಚ್ಚುವರಿ ಸಕ್ಕರೆ ಸಂಗ್ರಹ ತಡೆಗಟ್ಟಲು ಹಾಗೂ ಗ್ರಾಹಕರಿಗೆ ನಿರಂತರ ಪೂರೈಕೆ ಖಚಿತಪಡಿಸಲು ಕೇಂದ್ರ ಸರ್ಕಾರ, ಸಕ್ಕರೆ ದಾಸ್ತಾನು ನಿಯಮಗಳನ್ನು ಪರಿಷ್ಕರಿಸಿದೆ.

ಈ ತಿಂಗಳ ೧೫ರಿಂದ ಜಾರಿಗೆ ಬರುವಂತೆ ಸಕ್ಕರೆ ವ್ಯಾಪಾರಿಗಳ ದಾಸ್ತಾನು ಅವಧಿಯನ್ನು ೧೫ ದಿನಗಳಿಗೆ ಸೀಮಿತಗೊಳಿಸಲಾಗಿದ್ದು, ಗರಿಷ್ಠ ದಾಸ್ತಾನು ಮಿತಿಯನ್ನು ೧ ಸಾವಿರ ಕ್ವಿಂಟಲ್‌ಗೆ ನಿಗದಿಪಡಿಸಲಾಗಿದೆ. ಈ ನಿಯಮ ನವೆಂಬರ್ ಅಂತ್ಯದವರೆಗೆ ಜಾರಿಯಲ್ಲಿರಲಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಪರಿಷ್ಕೃತ ನಿಯಮಗಳಡಿ, ಕೋಲ್ಕತ್ತಾ ಮತ್ತು ಅದರ ವಿಸ್ತೃತ ಮಹಾನಗರ ಪ್ರದೇಶಗಳು ಹಾಗೂ ಅಸ್ಸಾಂನಲ್ಲಿ ಸಕ್ಕರೆ ದಾಸ್ತಾನು ಮಿತಿಯನ್ನು ೨ ಸಾವಿರ ಕ್ವಿಂಟಲ್‌ಗೆ ನಿಗದಿಪಡಿಸಲಾಗಿದೆ.

---

ಆಹಾರ ಭದ್ರತೆಯನ್ನು ಕಾಪಾಡಲು ದೇಶಗಳು ಕೈಗೊಳ್ಳುವ ನ್ಯಾಯಸಮ್ಮತ ಕ್ರಮಗಳನ್ನು ಆಹಾರದ ಶಸ್ತ್ರೀಕರಣ ಎಂದು ಪರಿಗಣಿಸಬಾರದು ಎಂದು ಭಾರತ ಎಚ್ಚರಿಸಿದೆ.

ಅಮೆರಿಕದ ಮಿಲ್ವಾಕಿಯಲ್ಲಿ ನಡೆದ ಜಿ-೨೦ ವಾಣಿಜ್ಯ ಸಚಿವರ ಸಭೆಯ ಅಧಿವೇಶನದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಈ ವಿಷಯ ತಿಳಿಸಿದರು.

ಆಹಾರವು ಭದ್ರತೆ, ಸ್ಥಿರತೆ ಮತ್ತು ಸಹಕಾರದ ಮೂಲವಾಗಿರುವುದನ್ನು ಖಚಿತಪಡಿಸಿಕೊಳ್ಳುವುದು ಎಲ್ಲರ ಸಾಮೂಹಿಕ ಉದ್ದೇಶವಾಗಬೇಕು ಎಂದು ಅವರು ಹೇಳಿದರು.

ಭಾರತ ಮತ್ತು ಐರೋಪ್ಯ ಒಕ್ಕೂಟದ ನಡುವಿನ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕುವುದು ಹಾಗೂ ಅದನ್ನು ಜಾರಿಗೆ ತರುವ ನಿಟ್ಟಿನಲ್ಲಿ ಆಗಿರುವ ಪ್ರಗತಿಯನ್ನೂ ಸಚಿವರು ಪರಿಶೀಲಿಸಿದರು.

---

ರಕ್ಷಣಾ ಪಡೆಗಳ ಮೂರು ವಿಭಾಗಗಳ ನಡುವೆ ಪ್ರಸ್ತುತ ಒತ್ತು ನೀಡಲಾಗುತ್ತಿರುವ ಸಮನ್ವಯ ಮತ್ತು ಏಕೀಕರಣದ ಮನೋಭಾವವನ್ನು ರಕ್ಷಣಾ ಲೆಕ್ಕಪತ್ರ ಇಲಾಖೆಯ ಹಣಕಾಸು ವ್ಯವಸ್ಥೆಯಲ್ಲೂ ಅಳವಡಿಸಿಕೊಳ್ಳಬೇಕಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಲಹೆ ನೀಡಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ರಕ್ಷಣಾ ಲೆಕ್ಕಪತ್ರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಣಕಾಸು ವ್ಯವಸ್ಥೆಗಳನ್ನೂ ಏಕೀಕರಿಸಿದರೆ, ಸಂಪೂರ್ಣ ರಕ್ಷಣಾ ನಿರ್ವಹಣೆ ಮತ್ತಷ್ಟು ಪರಿಣಾಮಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

---

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಇಂದು ಶ್ರೀಲಂಕಾದ ಆಡಳಿತಾರೂಢ 'ಜನತಾ ವಿಮುಕ್ತಿ ಪೆರಮುನ'ದ ಪ್ರಧಾನ ಕಾರ್ಯದರ್ಶಿ ತಿಲ್ವಿನ್ ಸಿಲ್ವಾ ನೇತೃತ್ವದ ನಿಯೋಗವನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಈ ಭೇಟಿಯ ಸಂದರ್ಭದಲ್ಲಿ ಉಭಯ ರಾಷ್ಟ್ರಗಳ ನಡುವಿನ ಗಾಢವಾದ ಸ್ನೇಹ ಸಂಬಂಧವನ್ನು ಬಲಪಡಿಸುವ ಕುರಿತು ಚರ್ಚಿಸಲಾಯಿತು. ವಿಶ್ವಾಸಾರ್ಹ ಪಾಲುದಾರನಾಗಿ, ಭಾರತ, ಯಾವಾಗಲೂ ಶ್ರೀಲಂಕಾದ ಪ್ರಗತಿ ಮತ್ತು ಸಮೃದ್ಧಿಯನ್ನು ಬೆಂಬಲಿಸುತ್ತದೆ ಎಂದು ಸಚಿವ ಡಾ. ಎಸ್.ಜೈಶಂಕರ್ ತಿಳಿಸಿದ್ದಾರೆ.

---

ದೇಶಾದ್ಯಂತ ನಾಳೆ ಗಾಂಧಿ ಜಯಂತಿ ಹಿನ್ನೆಲೆಯಲ್ಲಿ ವಿಶೇಷ ಗ್ರಾಮ ಸಭೆಗಳು ನಡೆಯಲಿವೆ.

ಗ್ರಾಮೀಣ ಭಾರತದ ಜೀವನ ಗುಣಮಟ್ಟ ವೃದ್ಧಿಸಲು ಮತ್ತು ಸಾರ್ವಜನಿಕ ಸೇವೆಗಳನ್ನು ಸುಧಾರಿಸಲು ಪಂಚಾಯಿತಿಗಳನ್ನು ಬಲಪಡಿಸುವ ಉದ್ದೇಶದಿಂದ ನಾಳಿನ ಗ್ರಾಮ ಸಭೆಗಳು ಕಾರ್ಯನಿರ್ವಹಿಸಲಿವೆ.

ಜನತಾ ಯೋಜನಾ ಆಂದೋಲನ-೨೦೨೬-೨೭ ನಾಳೆ ಚಾಲನೆಗೊಳ್ಳಲಿದೆ ಎಂದು ಗ್ರಾಮೀಣ ಅಭಿವೃದ್ಧಿ ಸಚಿವಾಲಯ ತಿಳಿಸಿದೆ. ಈ ಯೋಜನೆಯಡಿ ಗ್ರಾಮ ಪಂಚಾಯಿತಿಗಳು, ಆಯಾ ಗ್ರಾಮದ ಪಂಚಾಯಿತಿಯ ಆಯವ್ಯಯ ಅಭಿವೃದ್ಧಿ ಯೋಜನೆ-೨೦೨೭-೨೮ ತಯಾರಿಸಲಿವೆ.

ಈ ಆಂದೋಲನ ೨೦೧೮ರಿಂದ ನಡೆಯುತ್ತಿದ್ದು, ಎರಡೂವರೆ ಲಕ್ಷಕ್ಕೂ ಅಧಿಕ ಗ್ರಾಮ ಪಂಚಾಯಿತಿಗಳು ತಮ್ಮ ಯೋಜನೆಗಳನ್ನು ಇ-ಗ್ರಾಮ್ ಸ್ವರಾಜ್ ಪೋರ್ಟಲ್‌ನಲ್ಲಿ ಸಲ್ಲಿಸಲಿವೆ.

---

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, ಜನ ಸೇವೆಯಿಂದ ದೇಶ ಸೇವೆ ಎಂಬ ಅಭಿಯಾನ ನಡೆಯುತ್ತಿದೆ. ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ ’ವಿಕಸಿತ ಭಾರತ’ ಗುರಿ ಸಾಧನೆಯತ್ತ ಸಾಗುತ್ತಿದೆ.

ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ವೋಕಲ್ ಫಾರ್ ಲೋಕಲ್ ಅಂದರೆ ಸ್ಥಳೀಯ ಉತ್ಪನ್ನಗಳಿಗೆ ಧ್ವನಿಗೂಡಿಸಿ ಎಂಬುದರ ಕುರಿತ ವರದಿಯಿದೆ.

ದೇಶದಲ್ಲಿ ಗ್ರಾಹಕರ ಆಯ್ಕೆಗಳು ಬದಲಾಗುತ್ತಿದೆ. ಮೊದಲು ಆಮದು ಮಾಡಿಕೊಂಡ ಮತ್ತು ಬಹುದೊಡ್ಡ ಬ್ರಾಂಡ್‌ಗಳ ವಸ್ತುಗಳನ್ನು ಬಯಸುತ್ತಿದ್ದ ಜನರು ಇದೀಗ ದೇಶೀಯ ಉತ್ಪನ್ನಗಳತ್ತ ಒಲವು ತೋರುತ್ತಿದ್ದಾರೆ.

ಇತ್ತೀಚಿನ ದಿನಗಳಲ್ಲಿ ದೇಶೀಯ ಉತ್ಪನ್ನಗಳಿಗೆ ಮಾರುಕಟ್ಟೆ ಬೇಡಿಕೆ ಹೆಚ್ಚಾಗಿದ್ದರಿಂದ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಕರಕುಶಲ ಕರ್ಮಿಗಳಿಗೆ ಹೆಚ್ಚಿನ ಕೆಲಸ ದೊರಕುತ್ತಿದೆ. ಸ್ಥಳೀಯ ಉತ್ಪನ್ನಗಳಿಗೆ ಬೆಂಬಲ ನೀಡಬೇಕೆಂಬ ಪ್ರಧಾನಿ ನರೇಂದ್ರ ಮೋದಿಯವರ ಕರೆಯ ಮೇರೆಗೆ ದೇಶದ ಬಹುಪಾಲು ಜನರು ವಿದೇಶಿ ವಸ್ತುಗಳಿಗಿಂತ ಹೆಚ್ಚಾಗಿ ದೇಶೀಯ ಉತ್ಪನ್ನಗಳ ಖರೀದಿ ಹಾಗೂ ಬಳಕೆಗೆ ಮುಂದಾಗಿದ್ದಾರೆ.

---

ವಿಕಸಿತ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ವಿದ್ಯಾರ್ಥಿಗಳು ಪ್ರಮುಖ ಪಾತ್ರ ವಹಿಸಲಿದ್ದು, ಜವಾಬ್ದಾರಿಯುತ ನಾಗರಿಕತೆ ಮತ್ತು ಸಕ್ರಿಯ ಪಾಲ್ಗೊಳ್ಳುವಿಕೆಯ ಮೂಲಕ ಸ್ವಚ್ಛ,

ಹಸಿರು ಹಾಗೂ ಆರೋಗ್ಯಕರ ಭಾರತ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಸಲಹೆ ನೀಡಿದ್ದಾರೆ.

ದೆಹಲಿ ವಿಶ್ವವಿದ್ಯಾಲಯದ ಗಾರ್ಗಿ ಕಾಲೇಜಿನಲ್ಲಿ 'ಒಂದು ದಿನ, ಒಂದು ಗಂಟೆ, ಎಲ್ಲರೊಂದಿಗೆ' ಅಭಿಯಾನದಡಿ ಇಂದು ಶ್ರಮದಾನ ಮತ್ತು ಸ್ವಚ್ಛತಾ ಕಾರ್ಯಕ್ಕೆ ನೇತೃತ್ವ ವಹಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಅವರು, ಸ್ವಚ್ಛತಾ ಚಟುವಟಿಕೆಗಳಿಗೆ ಪ್ರತಿಯೊಬ್ಬರೂ ಕನಿಷ್ಠ ೩೦ ನಿಮಿಷ ಮೀಸಲಿಡುವಂತೆ ಕರೆ ನೀಡಿದರು.

---

ಜಪಾನ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಗೇಮ್ಸ್‌ನ ಪುರುಷರ ಹಾಕಿ ಸ್ಪರ್ಧೆಯ ಸೆಮಿಫೈನಲ್ ಪಂದ್ಯದಲ್ಲಿಂದು, ಭಾರತ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ೪-೩ ಗೋಲುಗಳಿಂದ ಮಣಿಸಿ, ಫೈನಲ್ ಪ್ರವೇಶಿಸಿದೆ. ಈ ಮೂಲಕ ಭಾರತಕ್ಕೆ ಮತ್ತೊಂದು ಪದಕ ಖಚಿತವಾಗಿದೆ.

ಹರ್ಮನ್‌ಪ್ರೀತ್ ಎರಡು ಗೋಲು ಗಳಿಸಿದರೆ, ಸುಖ್‌ಜೀತ್ ಸಿಂಗ್ ಮತ್ತು ಅಭಿಷೇಕ್ ತಲಾ ಒಂದು ಗೋಲ್ ಗಳಿಸಿದರು.

ದಕ್ಷಿಣ ಕೊರಿಯಾ ಮತ್ತು ಮಲೇಷ್ಯಾ ನಡುವಿನ ಎರಡನೇ ಸೆಮಿಫೈನಲ್‌ನಲ್ಲಿ ಗೆಲುವು ಸಾಧಿಸುವ ತಂಡವನ್ನು ಶನಿವಾರ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾರತ ಎದುರಿಸಲಿದೆ.

ಗ್ರೀಕೋ-ರೋಮನ್ ಕುಸ್ತಿ ಸ್ಪರ್ಧೆಯ ಪುರುಷರ ೯೭ ಕೆಜಿ ವಿಭಾಗದಲ್ಲಿ ಭಾರತದ ಕುಸ್ತಿಪಟು ನಿತೇಶ್ ಸಿವಾಚ್ ಬೆಳ್ಳಿ ಪದಕ ವಿಜೇತರಾಗಿದ್ದಾರೆ.

ಪುರುಷರ ಸ್ಕ್ವ್ಯಾಷ್ ವಿಭಾಗದ ಸೆಮಿಫೈನಲ್‌ನಲ್ಲಿ ಮಲೇಷ್ಯಾ ವಿರುದ್ಧ ೧-೨ ಅಂತರದಲ್ಲಿ ಸೋಲನುಭವಿಸಿದ ಭಾರತದ ಪುರುಷರ ತಂಡ, ಕಂಚಿನ ಪದಕ ಗೆದ್ದಿದೆ.

ಇದೇ ವೇಳೆ ಮಹಿಳೆಯರ ಸ್ಕ್ವ್ಯಾಷ್ ಸೆಮಿಫೈನಲ್‌ನಲ್ಲಿ ಭಾರತದ ಮಹಿಳಾ ತಂಡ ಕೂಡ, ಹಾಂಗ್‌ಕಾಂಗ್ ವಿರುದ್ಧ ೧-೨ ಅಂತರದಲ್ಲಿ ಸೋತು ಕಂಚಿನ ಪದಕ ಪಡೆದುಕೊಂಡಿದೆ.

ಇದರೊಂದಿಗೆ ಭಾರತದ ಒಟ್ಟು ಪದಕಗಳ ಸಂಖ್ಯೆ ೬೫ಕ್ಕೆ ತಲುಪಿದ್ದು, ಇದರಲ್ಲಿ ೧೦ ಚಿನ್ನ, ೨೩ ಬೆಳ್ಳಿ ಮತ್ತು ೩೨ ಕಂಚಿನ ಪದಕಗಳು ಸೇರಿವೆ. ಪ್ರಸ್ತುತ ಭಾರತ ಪದಕ ಪಟ್ಟಿಯಲ್ಲಿ ಲನೇ ಸ್ಥಾನದಲ್ಲಿದೆ.

ಪದಕ ವಿಜೇತ ಕ್ರೀಡಾಪಟುಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

---

೨೦೨೬ರ ಆರ್ಥಿಕ ವರ್ಷದ ಎರಡನೇ ತ್ರೈಮಾಸಿಕದಲ್ಲಿ ಭಾರತದ ಆರ್ಥಿಕತೆ ೭.೩ರಷ್ಟು ಬೆಳವಣಿಗೆ ಹೊಂದಲಿದೆ ಎಂದು ಅಂದಾಜಿಸಲಾಗಿದೆ.

ದೇಶೀಯ ಬೇಡಿಕೆ ಮತ್ತು ಬಂಡವಾಳ ಹೂಡಿಕೆ ಆರ್ಥಿಕತೆಗೆ ಪೂರಕವಾಗಿರಲಿದ್ದು, ಜಾಗತಿಕ ಧೃವೀಕರಣ ಮತ್ತು ಪೂರೈಕೆ ಸರಪಳಿಯಲ್ಲಿನ ಅಡಚಣೆ ಆರ್ಥಿಕತೆಗೆ ಮಾರಕವಾಗುವ ಸಂಭವವೂ ಇದೆ ಎಂದು ಕೇಂದ್ರ ಹಣಕಾಸು ಸಚಿವಾಲಯದ ಮಾಸಿಕ ವರದಿ ತಿಳಿಸಿದೆ.

__________ ಮುಕ್ತಾಯ __________